APRIL 22, 2026

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಉಪರಾಷ್ಟ್ರಪತಿ** ಸಿ.ಪಿ.ರಾಧಾಕೃಷ್ಣನ್ ಅವರು ಇಂದು ರಾಜ್ಯ ಪ್ರವಾಸ ಕೈಗೊಂಡಿದ್ದಾರೆ. ಬೀದರ ಜಿಲ್ಲೆ, ಭಾಲ್ಕಿ ಹಿರೇಮಠ ಸಂಸ್ಥಾನದ, ಶ್ರೀ ಚನ್ನಬಸವಾಶ್ರಮದಲ್ಲಿ ಆಯೋಜಿತ, ವಿಶ್ವ ಗುರು ಬಸವಣ್ಣವರ ಜಯಂತ್ಯೋತ್ಸವ, ಲಿಂಗೈಕ್ಯ ಡಾಕ್ಟರ ಚನ್ನಬಸವ ಪಟ್ಟದ್ದೇವರ 27 ನೇ ಸ್ಮರಣೋತ್ಸವ ಹಾಗೂ ಪೂಜ್ಯ ಶ್ರೀ, ನಾಡೋಜ ಡಾಕ್ಟರ ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಶರಣರು ಬೋಧಿಸಿದ ಕಾಯಕ ತತ್ವ ಹಾಗೂ ಆಧ್ಯಾತ್ಮದ ಹಾದಿ ಇಂದಿಗೂ ಪ್ರೇರಣೆಯಾಗಿದೆ. ನಾಡೋಜ ಡಾಕ್ಟರ ಬಸವಲಿಂಗಪಟ್ಟದೇವರ ಬಸವತತ್ವ ಪ್ರಚಾರದ ಕಾರ್ಯ ಹಾಗೂ ಅಕ್ಷರ ದಾಸೋಹ ಸಮಾಜಕ್ಕೆ ದಾರಿದೀಪ ಎಂದರು. ಕಾರ್ಯಕ್ರಮದಲ್ಲಿ ರಾಜ್ಯಪಾಲರಾದ ಥಾವರಚಂದ್ ಗೆಹ್ಲೋಟ್, ರಾಜ್ಯಸಭೆ ವಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಖಾತೆ ಸಚಿವ ಈಶ್ವರ ಖಂಡ್ರೆ, ಪೌರಾಡಳಿತ ಖಾತೆ ಸಚಿವ ರಹೀಂ ಖಾನ್ ಸೇರಿದಂತೆ ಗಣ್ಯರು ಇದ್ದರು. ಕಾರ್ಯಕ್ರಮ ಆರಂಭಕ್ಕೂ ಮುನ್ನ, ಬೀದರ ವಿಮಾನ ನಿಲ್ದಾಣಕ್ಕೆ ಆಗಮಿಸಿದ, ಉಪ ರಾಷ್ಟ್ರಪತಿ ಸಿ.ಪಿ ರಾಧಾಕೃಷ್ಣನ್ ಅವರನ್ನು, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಸ್ವಾಗತಿಸಿ, ಬರಮಾಡಿಕೊಂಡರು.

<><><>

**ಈ ಮಧ್ಯಾಹ್ನ ಕಲಬುರಗಿಗೆ** ತಲುಪಲಿರುವ ಉಪ ರಾಷ್ಟ್ರಪತಿ ಸಿ.ಪಿ ರಾಧಾಕೃಷ್ಣನ್, ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಹತ್ತನೇ ಘಟಿಕೋತ್ಸವದಲ್ಲಿ ಪಾಲ್ಗೊಂಡು ಭಾಷಣ ಮಾಡಲಿದ್ದಾರೆ.

<><><>

**ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ** 10 ನೇ ಘಟಿಕೋತ್ಸವದಲ್ಲಿ, 24 ಜನರಿಗೆ ಪಿ.ಎಚ್.ಡಿ, 197 ಜನ ವಿದ್ಯಾರ್ಥಿಗಳಿಗೆ ಸ್ನಾತಕ ಪದವಿ ಹಾಗೂ 547 ವಿದ್ಯಾರ್ಥಿಗಳಿಗೆ ಸ್ನಾತಕೋತ್ತರ ಪದವಿ ಪ್ರದಾನಿಸಲಾಗುವುದು ಎಂದು ವಿಶ್ವವಿದ್ಯಾಲಯದ ಉಪ ಕುಲಪತಿ ಬಟ್ಟು ಸತ್ಯನಾರಾಯಣ ತಿಳಿಸಿದ್ದಾರೆ. ಭಾರತೀಯ ಸಮಾಜ ವಿಜ್ಞಾನ ಸಂಶೋಧನಾ ಮಂಡಳಿ, ವಿವಿಧ 7 ವಿಷಯಗಳ ವಿದ್ಯಾರ್ಥಿ ಸಂಶೋಧನೆಗಳಿಗೆ, 80 ಲಕ್ಷ ರೂಪಾಯಿ ಅನುದಾನ ನೀಡಿದೆ ಎಂದು ತಿಳಿಸಿದ್ದಾರೆ.

<><><>

**ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ,** 75 ನೇ ವಾರ್ಷಿಕ ಘಟಿಕೋತ್ಸವ, ನಾಳೆ ಬೆಳಗ್ಗೆ 11 ಗಂಟೆಗೆ ಗಾಂಧಿ ಭವನದಲ್ಲಿ ಜರುಗಲಿದೆ. ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಇಸ್ರೋ ನಿಕಟಪೂರ್ವ ಅಧ್ಯಕ್ಷರಾದ ಎ.ಎಸ್ ಕಿರಣಕುಮಾರ ಘಟಿಕೋತ್ಸವ ಭಾಷಣ ಮಾಡಲಿದ್ದಾರೆ ಎಂದು ಉಪ ಕುಲಪತಿ ಪ್ರೊಫೆಸರ್ ಎ.ಎಂ ಖಾನ್ ತಿಳಿಸಿದ್ದಾರೆ.

<><><>

**ಪ್ರೊಫೆಸರ ಎ.ಎಂ ಖಾನ್ ಧ್ವನಿ– 41 ಸೆಕೆಂದುಗಳು**

<><><>

**ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ನಾಳೆಯಿಂದ** ಎರಡು ದಿನಗಳ ಕಾಲ ರಾಜ್ಯಾದ್ಯಂತ, ಸಿಇಟಿ– ಸಾಮಾನ್ಯ ಪ್ರವೇಶ ಪರೀಕ್ಷೆಗಳನ್ನು ಆಯೋಜಿಸಿದೆ. ಗದಗ ಜಿಲ್ಲೆಯಲ್ಲಿ 23 ಹಾಗೂ 24 ರಂದು ನಡೆಯುವ, ಪಿಇಟಿ–ಪರೀಕ್ಷೆಗಳನ್ನು ಅಚ್ಚುಕಟ್ಟಾಗಿ ಹಾಗೂ ಪಾರದರ್ಶಕವಾಗಿ ಜರುಗಿಸಲು ಕ್ರಮ ಕೈಗೊಳ್ಳಲಾಗಿದೆ, ಪರೀಕ್ಷಾ ಕೇಂದ್ರಗಳ ಸುತ್ತ, 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶ ಎಂದು ಘೋಷಿಸಿರುವುದಾಗಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದ್ದಾರೆ. ಜಿಲ್ಲೆಯ 10 ಪರೀಕ್ಷಾ ಕೇಂದ್ರಗಳಲ್ಲಿ, ಒಟ್ಟು 3 ಸಾವಿರದ 533 ಜನ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ನಿರ್ದೇಶಕ ಮ.ಸ ನಾಯಕ ತಿಳಿಸಿದ್ದಾರೆ.

<><><>

**ಹಾವೇರಿ ಜಿಲ್ಲೆಯ 11 ಪರೀಕ್ಷಾ ಕೇಂದ್ರಗಳಲ್ಲಿ** ಸಿ.ಇ.ಟಿ ಪರೀಕ್ಷೆಗಳು ಜರುಗಲಿದ್ದು, 4 ಸಾವಿರದ 651 ವಿದ್ಯಾರ್ಥಿಗಳು ಪರೀಕ್ಷೆಗೆ ಹೆಸರು ನೋಂದಾಯಿಸಿದ್ದಾರೆ ಎಂದು ಜಿಲ್ಲಾಧಿಕಾರಿ, ಡಾಕ್ಟರ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಉತ್ತರ ಕನ್ನಡ ಜಿಲ್ಲೆಯ, ಎಲ್ಲ ಪರೀಕ್ಷಾ ಕೇಂದ್ರಗಳ, 200 ಮೀಟರ್ ವ್ಯಾಪ್ತಿಯಲ್ಲಿರುವ ಜೆರಾಕ್ಸ್ ಅಂಗಡಿ, ಸೈಬರ್ ಕೆಫೆಗಳನ್ನು ಮುಚ್ಚುವಂತೆ ಹಾಗೂ ಪರೀಕ್ಷಾ ಕೇಂದ್ರಗಳಿಗೆ, ಅಭ್ಯರ್ಥಿಗಳು ಇಲೆಕ್ಟ್ರಾನಿಕ್ಸ್ ವಸ್ತು ತರುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ.

<><><>

**2025 ರ ಪಹಲ್ಗಾಮ್ ಭಯೋತ್ಪಾದಕ** ದಾಳಿ ನಡೆದು, ಇಂದಿಗೆ ಒಂದು ವರ್ಷವಾಗಿದೆ. ದಾಳಿಯಲ್ಲಿ ಮಡಿದ ಮುಗ್ಧ ಜೀವಗಳಿಗೆ ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವರಾದ ಪ್ರಲ್ಹಾದ್ ಜೋಷಿ ತಮ್ಮ ಎಕ್ಸ್ ಖಾತೆ ಮೂಲಕ ಗೌರವ ನಮನಗಳನ್ನು ಸಲ್ಲಿಸಿದ್ದಾರೆ. ಭೀಕರ ದಾಳಿಯಲ್ಲಿ ಪ್ರಾಣತೆತ್ತವರಿಗೆ ರಾಷ್ಟ್ರವು ಭಾವಪೂರ್ಣ ಶ್ರದ್ಧಾಂಜಲಿ ಅರ್ಪಿಸುವುದರ ಜೊತೆಗೆ, ಅವರ ಕುಟುಂಬಗಳ ದುಃಖದಲ್ಲಿ ಅಚಲವಾಗಿ ಭಾಗಿಯಾಗಿದೆ ಎಂದು ತಿಳಿಸಿದ್ದಾರೆ.

<><><>

**ವಿಜಯಪುರ ಜಿಲ್ಲೆ, ಆಲಮಟ್ಟಿಯ** ಲಾಲ ಬಹದ್ದೂರ ಶಾಸ್ತ್ರೀ ಜಲಾಶಯದ ಆವರಣದಲ್ಲಿರುವ, ಉದ್ಯಾನವನ ಇತ್ತೀಚೆಗಷ್ಟೇ ಲೋಕಾರ್ಪಣೆಗೊಂಡಿದ್ದು, ಉದ್ಯಾನವನಕ್ಕೆ ತೆರಳಲು ವಿಜಯಪುರ

ನಗರದಿಂದ ಬಸ್ ಸೇವೆ ಆರಂಭಿಸಲಾಗಿದೆ. ಪ್ರತಿ ದಿನ ಬೆಳಗ್ಗೆ 10 ಗಂಟೆಯಿಂದ, ನಗರದ ಕಿತ್ತೂರ ರಾಣಿ ಚನ್ನಮ್ಮ ಬಸ್ ನಿಲ್ದಾಣದಿಂದ, ಆಲಮಟ್ಟಿಗೆ 6 ಸುತ್ತು ಸಂಚಾರ ಮಾಡಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ ಪಾಟೀಲ್ ತಮ್ಮ ಎಕ್ಸ್ ಖಾತೆ ಮೂಲಕ ತಿಳಿಸಿದ್ದಾರೆ.

<><><>

**ವರನಟ ಡಾಕ್ಟರ ರಾಜ್ ಕುಮಾರ್ ಅವರ,** 97ನೇ ಜನ್ಮ ದಿನಾಚರಣೆಯನ್ನು, ಕಲಬುರಗಿ ಜಿಲ್ಲಾಡಳಿತದ ವತಿಯಿಂದ, ನಾಡಿದ್ದು, 24 ರಂದು, ಬೆಳಗ್ಗೆ 10 ಗಂಟೆಗೆ ಜಿಲ್ಲಾ ಮಟ್ಟದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ತಿಳಿಸಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>